**All India Radio: Bangalore**
**National Bulletin In Kannada**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**03.10.2026 7.35 pm**

**<><><*><><>**

ಮುಖ್ಯಾಂಶಗಳು

**<><*<><>*><>**

೧. ಪ್ರಧಾನಿ ನರೇಂದ್ರ ಮೋದಿಯವರ ಜನಪ್ರಿಯ 'ಮನ್ ಕಿ ಬಾತ್' ಕಾರ್ಯಕ್ರಮಕ್ಕೆ ಇಂದಿಗೆ ೧೨ ವರ್ಷ ಪೂರ್ಣ

೨. ಅಂತರ ಸಂಸದೀಯ ಒಕ್ಕೂಟದ ಸಭೆಯಲ್ಲಿ ಭಾಗವಹಿಸಲು ಭಾರತೀಯ ನಿಯೋಗ ತಾಂಜಾನಿಯಾಗೆ ಭೇಟಿ

೩. ಗೋಪಾಲಕರ ಸಮ್ಮೇಳನದಲ್ಲಿ ಪಶುಪಾಲನೆ ಮೂಲಸೌಕರ್ಯಗಳಿಗೆ ಹಲವು ಮಹತ್ವದ ಘೋಷಣೆಗಳನ್ನು ಮಾಡಿದ ಸಚಿವ ಅಮಿತ್ ಶಾ

೪. ಏಷ್ಯನ್ ಗೇಮ್ಸ್; ೮೫ ಪದಕಗಳೊಂದಿಗೆ ಪಟ್ಟಿಯಲ್ಲಿ ೪ನೇ ಸ್ಥಾನಕ್ಕೇರಿದ ಭಾರತ

**<><*<><>*><>**

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಮಾಸಿಕ ರೇಡಿಯೋ ಕಾರ್ಯಕ್ರಮ 'ಮನ್ ಕಿ ಬಾತ್' ಇಂದಿಗೆ ೧೨ ವರ್ಷಗಳನ್ನು ಪೂರೈಸಿದೆ. ೨೦೧೪ರಲ್ಲಿ ವಿಜಯದಶಮಿ ಸಂದರ್ಭದಲ್ಲಿ ಇದೇ ದಿನ ಕಾರ್ಯಕ್ರಮದ ಮೊದಲ ಸಂಚಿಕೆ ಪ್ರಸಾರವಾಗಿತ್ತು. ಇತ್ತೀಚೆಗೆ 'ಮನ್ ಕಿ ಬಾತ್'ನ ೧೩೮ನೇ ಸಂಚಿಕೆ ಪ್ರಸಾರಗೊಂಡಿದೆ. ಕಳೆದ ೧೨ ವರ್ಷಗಳಲ್ಲಿ ದೇಶಾದ್ಯಂತ ನಡೆಯುತ್ತಿರುವ ಸಕಾರಾತ್ಮಕ ಬದಲಾವಣೆಗಳನ್ನು ಬಿಂಬಿಸಲು ಹಾಗೂ ಭಾರತದ ಅಭಿವೃದ್ಧಿ ಪಯಣದಲ್ಲಿ ನಾಗರಿಕರು ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಉತ್ತೇಜಿಸಲು 'ಮನ್ ಕಿ ಬಾತ್' ವಿಶಿಷ್ಟ ವೇದಿಕೆಯಾಗಿ ಕಾರ್ಯನಿರ್ವಹಿಸಿದೆ. ಈ ಮಾಸಿಕ ಕಾರ್ಯಕ್ರಮದ ಮೂಲಕ ಪ್ರಧಾನಮಂತ್ರಿಯವರು ಶಿಕ್ಷಣ, ಆರೋಗ್ಯ ಸೇವೆ, ಪರಿಸರ ಸಂರಕ್ಷಣೆ, ನವೋದ್ಯಮ ಹಾಗೂ ಸಮಾಜ ಸೇವೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಮಾಡುತ್ತಿರುವ ದೇಶದ ಜನರ ಸ್ಫೂರ್ತಿದಾಯಕ ಕಥೆಗಳನ್ನು ಹಂಚಿಕೊಳ್ಳುತ್ತಾರೆ. 'ಮನ್ ಕಿ ಬಾತ್' ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನ ಜಾಲದ ಮೂಲಕ ಪ್ರಸಾರವಾಗುವುದರ ಜೊತೆಗೆ, ಆಕಾಶವಾಣಿ ಸುದ್ದಿ ಜಾಲತಾಣ ಹಾಗೂ ನ್ಯೂಸ್ಆನ್ಏರ್ ಮೊಬೈಲ್ ಆಪ್‌ನಲ್ಲಿಯೂ ಲಭ್ಯವಿದೆ. ಆಕಾಶವಾಣಿ ಸುದ್ದಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್‌ಗಳಲ್ಲಿಯೂ ಕಾರ್ಯಕ್ರಮವನ್ನು ನೇರ ಪ್ರಸಾರ ಮಾಡಲಾಗುತ್ತದೆ.

**<><*<><>*><>**

ರಾಜ್ಯಸಭೆಯ ಉಪಸಭಾಪತಿ ಹರಿವಂಶ್ ನೇತೃತ್ವದ ಭಾರತೀಯ ಸಂಸದೀಯ ನಿಯೋಗವು ತಾಂಜಾನಿಯಾಗೆ ತೆರಳಿದೆ. ಇದೇ ಸೋಮವಾರದಿಂದ ೯ ರವರೆಗೆ ನಡೆಯಲಿರುವ ಅಂತರ ಸಂಸದೀಯ ಒಕ್ಕೂಟ-ಐಪಿಯು ೧೫೩ನೇ ಮಹಾಸಭೆ ಹಾಗೂ ಸಂಬಂಧಿತ ಸಭೆಗಳಲ್ಲಿ ನಿಯೋಗ ಭಾಗವಹಿಸಲಿದೆ. ಸಮಕಾಲಿನ ಜಾಗತಿಕ ಮಹತ್ವದ ವಿವಿಧ ವಿಷಯಗಳ ಕುರಿತು ನಡೆಯಲಿರುವ ಸಭೆಗಳು, ಚರ್ಚೆಗಳು

ಮತ್ತು ಕಾರ್ಯಾಗಾರಗಳಲ್ಲಿ ಭಾರತೀಯ ನಿಯೋಗ ಪಾಲ್ಗೊಂಡು, ಈ ವಿಷಯಗಳ ಬಗ್ಗೆ ಭಾರತದ ನಿಲುವುಗಳನ್ನು ಮಂಡಿಸಲಿದೆ. ಐಪಿಯು ಆಡಳಿತ ಮಂಡಳಿ ಸಭೆ, ಸಾಮಾನ್ಯ ಚರ್ಚೆ, ತುರ್ತು ವಿಷಯದ ಮೇಲಿನ ಚರ್ಚೆ ಹಾಗೂ ಐಪಿಯು ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿರುವ ಅಭ್ಯರ್ಥಿಗಳೊಂದಿಗೆ ನಡೆಯುವ ಸಂವಾದದಲ್ಲಿ ಉಪಸಭಾಪತಿ ಹರಿವಂಶ್ ಭಾಗವಹಿಸಲಿದ್ದಾರೆ. ಭಾರತೀಯ ನಿಯೋಗದ ಸದಸ್ಯರು, ಪ್ರಜಾಪ್ರಭುತ್ವ ಮತ್ತು ಮಾನವ ಹಕ್ಕುಗಳು, ಶಾಂತಿ ಮತ್ತು ಅಂತಾರಾಷ್ಟ್ರೀಯ ಭದ್ರತೆ, ಸುಸ್ಥಿರ ಅಭಿವೃದ್ಧಿ, ಮಹಿಳೆಯರ ಭಾಗವಹಿಸುವಿಕೆ, ವಿಜ್ಞಾನ ಮತ್ತು ತಂತ್ರಜ್ಞಾನ ಸೇರಿದಂತೆ ಹಲವು ವಿಷಯಗಳ ಕುರಿತು ಚರ್ಚೆ ನಡೆಸಲಿದ್ದಾರೆ. ಭಯೋತ್ಪಾದನೆ ನಿಗ್ರಹ, ಮಾನಸಿಕ ಆರೋಗ್ಯ, ಪ್ರಮುಖ ಖನಿಜಗಳು, ಕೃತಕ ಬುದ್ಧಿಮತ್ತೆ, ಭವಿಷ್ಯದ ಉದ್ಯೋಗ, ಕಡಲ ಭದ್ರತೆ, ಹವಾಮಾನ ಬದಲಾವಣೆ ಹಾಗೂ ಪರ್ವತ ಮತ್ತು ಸಾಗರ ಪರಿಸರ ವ್ಯವಸ್ಥೆಗಳ ಸಂರಕ್ಷಣೆ ಕುರಿತು ಚರ್ಚೆಗಳು ನಡೆಯಲಿವೆ.

**<><*<><>*><>**

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನವೆಂಬರ್ ೩ರಂದು ಮಹಾರಾಷ್ಟ್ರದ ಬಾರಾಮತಿಗೆ ಭೇಟಿ ನೀಡಲಿದ್ದು, ನೂತನವಾಗಿ ಅಭಿವೃದ್ಧಿಪಡಿಸಲಾದ 'ಪ್ರೇರಣಾ ಸ್ಥಳ'ವನ್ನು ಉದ್ಘಾಟಿಸಲಿದ್ದಾರೆ ಎಂದು ಎನ್‌ಸಿಪಿ-ಎಸ್‌ಪಿ ಮುಖ್ಯಸ್ಥ ಶರದ್ ಪವಾರ್ ತಿಳಿಸಿದ್ದಾರೆ. ಸುದ್ದಿಗೋಷ್ಠಿಯೊಂದರಲ್ಲಿ ಮಾತನಾಡಿದ ಅವರು, ಪ್ರೇರಣಾ ಸ್ಥಳದಲ್ಲಿ ೪ ಟನ್ ತೂಕದ ಭಗವಾನ್ ಬುದ್ಧನ ಪ್ರತಿಮೆ ಸ್ಥಾಪಿಸಲಾಗಿದೆ ಎಂದು ತಿಳಿಸಿದ್ದಾರೆ.  ವಿದ್ಯಾ ಪ್ರತಿಷ್ಠಾನದಲ್ಲಿ ನಡೆಯಲಿರುವ ಉದ್ಘಾಟನಾ ಸಮಾರಂಭಕ್ಕೆ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್, ಉಪಮುಖ್ಯಮಂತ್ರಿಗಳಾದ ಏಕನಾಥ್ ಶಿಂಧೆ ಮತ್ತು ಸುನೇತ್ರಾ ಪವಾರ್, ಸೀರಂ ಇನ್‌ಸ್ಟಿಟ್ಯೂಟ್‌ನ ಸೈರಸ್ ಪೂನಾವಾಲಾ ಹಾಗೂ ಮೈಕ್ರೋಸಾಫ್ಟ್ ಪ್ರತಿನಿಧಿಗಳನ್ನು ಆಹ್ವಾನಿಸಲಾಗಿದೆ. ಶರದ್ ಪವಾರ್ ಅವರು ವಿದ್ಯಾ ಪ್ರತಿಷ್ಠಾನದ ಅಧ್ಯಕ್ಷರಾಗಿದ್ದಾರೆ.

**<><*<><>*><>**

ಗೋಪಾಲಕರು ಹಾಗೂ ಪಶುಪಾಲನೆಗೆ ಸಂಬಂಧಿಸಿದಂತೆ ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಇಂದು ಹಲವು ಮಹತ್ವದ ಘೋಷಣೆಗಳನ್ನು ಮಾಡಿದ್ದಾರೆ. ಭೋಪಾಲ್‌ನ ಬಿಎಚ್‌ಇಎಲ್ ದಸರಾ ಮೈದಾನದಲ್ಲಿ ನಡೆದ ರಾಜ್ಯಮಟ್ಟದ ಗೋಪಾಲಕರ ಸಮ್ಮೇಳನವನ್ನುದ್ದೇಶಿಸಿ ಮಾತನಾಡಿದ ಅವರು, ಗೋಶಾಲೆಗಳಿಗಾಗಿ ೧೦೧ ಕೋಟಿ ರೂಪಾಯಿ ಅನುದಾನ ಘೋಷಿಸಿದ್ದಾರೆ. ಈ ಸಂದರ್ಭದಲ್ಲಿ ೧೧ ಜಿಲ್ಲೆಗಳ ಸುಮಾರು ೩೫ ಸಾವಿರ ಗೋಪಾಲಕರು ಸಮ್ಮೇಳನದಲ್ಲಿ ಭಾಗವಹಿಸಿದ್ದರು. ಇದೇ ವೇಳೆ, ೨೫೫ ಕೋಟಿ ರೂಪಾಯಿ ವೆಚ್ಚದಲ್ಲಿ ಉಜ್ಜಯಿನಿಯಲ್ಲಿ ನಿರ್ಮಿಸಲಾಗುವ ಹಾಲು ಸಂಸ್ಕರಣಾ ಘಟಕಕ್ಕೆ ಅಮಿತ್ ಶಾ ಅವರು ವರ್ಚುವಲ್ ಮೂಲಕ ಶಂಕುಸ್ಥಾಪನೆ ನೆರವೇರಿಸಿದರು.  ನಂತರ ಮಾತನಾಡಿದ ಅವರು, ಭೋಪಾಲ್‌ನಲ್ಲಿ ೧೨ ಕೋಟಿ ರೂಪಾಯಿ ವೆಚ್ಚದಲ್ಲಿ ಕೇಂದ್ರೀಯ ಪ್ರಯೋಗಾಲಯ ಸ್ಥಾಪಿಸಲಾಗಿದ್ದು, ಶಿವಪುರಿಯಲ್ಲಿ ಮಿನಿ ಡೇರಿ ಘಟಕ ನಿರ್ಮಿಸಲಾಗುವುದು. ಹಸು ಮತ್ತು ಎಮ್ಮೆ ತಳಿಗಳ ಸುಧಾರಣೆಗೆ ಈ ಘಟಕಗಳು ಕಾರ್ಯನಿರ್ವಹಿಸಲಿವೆ ಎಂದು ತಿಳಿಸಿದರು.

**<><*<><>*><>**

ಆಂಧ್ರ ಪ್ರದೇಶದ ಸತ್ಯವೇಡು ಮಂಡಲದ ಶ್ರೀ ಸಿಟಿಯಲ್ಲಿರುವ ಖಾಸಗಿ ಕೈಗಾರಿಕಾ ಘಟಕವೊಂದರಲ್ಲಿ ಇಂದು ಸಂಭವಿಸಿದ ಬಾಯ್ಲರ್ ಸ್ಫೋಟದಲ್ಲಿ ನಾಲ್ವರು ಕಾರ್ಮಿಕರು ಮೃತಪಟ್ಟಿದ್ದು, ಓರ್ವ ಗಂಭೀರವಾಗಿ ಗಾಯಗೊಂಡಿದ್ದಾರೆ. ವಿಶೇಷ ಆರ್ಥಿಕ ವಲಯದಲ್ಲಿರುವ ಕಾರ್ಖಾನೆಯೊಂದರೊಳಗೆ ಈ ಸ್ಫೋಟ ಸಂಭವಿಸಿದೆ. ಘಟನೆ ಕುರಿತು ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್.ಚಂದ್ರಬಾಬು ನಾಯ್ಡು

ಆಘಾತ ವ್ಯಕ್ತಪಡಿಸಿದ್ದಾರೆ. ಅಗತ್ಯಕ್ರಮಗಳನ್ನು ಕೈಗೊಳ್ಳುವಂತೆ ಹಾಗೂ ಮೃತರ ಕುಟುಂಬಗಳಿಗೆ ನೆರವು ನೀಡುವಂತೆ ಹಿರಿಯ ಅಧಿಕಾರಿಗಳಿಗೆ ಅವರು ಸೂಚನೆ ನೀಡಿದ್ದಾರೆ.

**<><*<><>*><>**

ಭಾರತವು ಕಳೆದ ದಶಕದಲ್ಲಿ ವಿವೇಕಯುತ ಹಣಕಾಸು ನಿರ್ವಹಣೆ, ಮೂಲಸೌಕರ್ಯ ಹೂಡಿಕೆ, ಬ್ಯಾಂಕಿಂಗ್ ಸುಧಾರಣೆಗಳು, ಉತ್ತಮ ಸೇವಾ ವಿತರಣಾ ವ್ಯವಸ್ಥೆಗಳು ಮತ್ತು ನಿರಂತರ ಸುಧಾರಣೆಗಳ ಸಂಯೋಜನೆಯ ಮೂಲಕ ರಾಷ್ಟ್ರದ ಆರ್ಥಿಕ ಬಲ ಮತ್ತು ಸ್ಥಿತಿಸ್ಥಾಪಕತ್ವವನ್ನು ರೂಪಿಸಲಾಗಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ೫ನೇ ಕೌಟಿಲ್ಯ ಆರ್ಥಿಕ ಸಮಾವೇಶವನ್ನು ಉದ್ದೇಶಿಸಿ ಮಾತನಾಡಿದ ಅವರು, ಜಿಎಸ್‌ಟಿ ಮತ್ತು ನಾಲ್ಕು ಕಾರ್ಮಿಕ ಸಂಹಿತೆಗಳ ಮೂಲಕ ಸರ್ಕಾರವು ರಾಷ್ಟ್ರೀಯ ಚೌಕಟ್ಟುಗಳನ್ನು ಬಲಪಡಿಸಿದೆ ಎಂದು ತಿಳಿಸಿದರು. ೨೦೨೬-೨೭ನೇ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ಶೇಕಡಾ ೭.೮ರಷ್ಟು ನೈಜ ಜಿಡಿಪಿ ಬೆಳವಣಿಗೆಯನ್ನು ಉಲ್ಲೇಖಿಸಿದ ಅವರು, ಕಳೆದ ನಾಲ್ಕು ವರ್ಷಗಳ ಆರ್ಥಿಕ ಆಘಾತಗಳನ್ನು ಭಾರತವು ಯಶಸ್ವಿಯಾಗಿ ಎದುರಿಸಿದೆ ಎಂದು ಸಚಿವರು ಮಾಹಿತಿ ನೀಡಿದರು.

**<><*<><>*><>**

೯೩ನೇ ಭಾರತೀಯ ವಾಯುಪಡೆ ದಿನವನ್ನು ಈ ತಿಂಗಳ ೮ರಂದು ಆಚರಿಸಲಾಗುವುದು. ‘ಭಾರತೀಯ ವಾಯುಪಡೆ ಅಚಲ, ಅಜೇಯ ಮತ್ತು ನಿಖರ’ ಎಂಬುದು ಈ ವರ್ಷದ ವಾಯುಪಡೆ ದಿನದ ಧ್ಯೇಯವಾಕ್ಯವಾಗಿದೆ. ವಾಯುಪಡೆ ದಿನಾಚರಣೆ ಅಂಗವಾಗಿ ವಾಯುಪಡೆ ಪಥಸಂಚಲನ, ಭಾರತೀಯ ವಾಯುಪಡೆಯ ವಿವಿಧ ಸಾಧನಗಳ ಪ್ರದರ್ಶನ, ಶಕ್ತಿ ಏರ್ ವಾರಿಯರ್ ಡ್ರಿಲ್ ತಂಡದ ಪ್ರದರ್ಶನ, ಭಾರತೀಯ ವಾಯುಪಡೆಯ ಡ್ರಮ್ಮರ್‌ಗಳ ತಂಡದ ಕಾರ್ಯಕ್ರಮ ಹಾಗೂ ಹೆರಿಟೇಜ್ ಫ್ಲೈಟ್‌ನ ವೈಮಾನಿಕ ಪ್ರದರ್ಶನ ಸೇರಿದಂತೆ ವಿವಿಧ ಕಾರ್ಯಕ್ರಮಗಳು ನಡೆಯಲಿವೆ. ಹಿಂಡನ್ ವಾಯುಪಡೆ ನಿಲ್ದಾಣದಲ್ಲಿ ನಡೆಯಲಿರುವ ಪಥಸಂಚಲನವನ್ನು ವಾಯುಪಡೆ ಮುಖ್ಯಸ್ಥ ಏರ್ ಚೀಫ್ ಮಾರ್ಷಲ್ ಎ.ಪಿ.ಸಿಂಗ್ ವೀಕ್ಷಿಸಲಿದ್ದಾರೆ. ಸೇನಾ ಮುಖ್ಯಸ್ಥ ಜನರಲ್ ಧೀರಜ್ ಸೇಠ್, ನೌಕಾಪಡೆ ಮುಖ್ಯಸ್ಥ ಅಡ್ಮಿರಲ್ ಕೃಷ್ಣ ಸ್ವಾಮಿನಾಥನ್ ಹಾಗೂ ವಾಯುಪಡೆಯ ಮಾಜಿ ಮುಖ್ಯಸ್ಥರು ಭಾಗವಹಿಸಲಿದ್ದಾರೆ.

**<><*<><>*><>**

ಜಪಾನ್‌ನ ಐಚಿ ನಗೋಯಾದಲ್ಲಿ ನಡೆಯುತ್ತಿರುವ ಏಷ್ಯನ್ ಗೇಮ್ಸ್ ೨೦೨೬ರಲ್ಲಿ ಭಾರತ ಇಂದು ೫ ಸ್ವರ್ಣ, ೨ ಬೆಳ್ಳಿ, ೨ ಕಂಚಿನ ಪದಕಗಳನ್ನು ಪಡೆಯುವ ಮೂಲಕ ತನ್ನ ಅಜೇಯ ಓಟ ಮುಂದುವರಿಸಿದೆ. ಕೊರೊಗಿ ಸ್ಪೋರ್ಟ್ಸ್ ಪಾರ್ಕ್‌ನಲ್ಲಿ ನಡೆದ ಟಿ-೨೦ ಕ್ರಿಕೆಟ್‌ನ ಫೈನಲ್ ಪಂದ್ಯದಲ್ಲಿ ಹಾಲಿ ಚಾಂಪಿಯನ್ ಭಾರತ ತಂಡ, ಪಾಕಿಸ್ತಾನ ವಿರುದ್ಧ ೧೯ ರನ್ ಗಳಿಂದ ಜಯ ಸಾಧಿಸಿ, ಚಿನ್ನದ ಪದಕ ಪಡೆದುಕೊಂಡಿದೆ. ಮಹಿಳೆಯರ ವೈಯಕ್ತಿಕ ಗಾಲ್ಫ್ ವಿಭಾಗದಲ್ಲಿ ಕರ್ನಾಟಕದ ಪ್ರಣವಿ ಶರತ್ ಅರಸು ಭಾರತಕ್ಕೆ ಮೊಟ್ಟ ಮೊದಲ ಚಿನ್ನದ ಪದಕ ತಂದುಕೊಟ್ಟಿದ್ದಾರೆ. ೨೩ ವರ್ಷದ ಪ್ರಣವಿ ಅಂತಿಮ ಸುತ್ತಿನಲ್ಲಿ ಚೀನಾದ ಇನ್ ರುವೊನಿಂಗ್ ಅವರನ್ನು ಹಿಮ್ಮೆಟ್ಟಿಸಿ ಅಗ್ರ ಸ್ಥಾನ ಪಡೆದುಕೊಂಡರು. ಮಹಿಳಾ ರಿಕರ್ವ್ ವೈಯಕ್ತಿಕ ಬಿಲ್ಲುಗಾರಿಕೆ ಸ್ಪರ್ಧೆಯಲ್ಲಿ ಭಾರತದ ಉದಯೋನ್ಮುಖ ಬಿಲ್ಲುಗಾರ್ತಿ ಕುಂಕುಮ್ ಮೊಹೊದ್ ಚಿನ್ನದ ಪದಕ ತಮ್ಮದಾಗಿಸಿಕೊಂಡಿದ್ದಾರೆ.  ದಕ್ಷಿಣ ಕೊರಿಯಾದ ಓಹ್ ಯೆಜಿನ್ ವಿರುದ್ಧ ನಡೆದ ಶೂಟ್ ಆಫ್‌ನಲ್ಲಿ ೧೦-೮ ಅಂತರದಲ್ಲಿ ಅವರು ಗೆಲುವು ಸಾಧಿಸಿದರು. ಪುರುಷರ ೫೭ ಕೆಜಿ ವಿಭಾಗದ ಕುಸ್ತಿ ಸ್ಪರ್ಧೆಯಲ್ಲಿ ಭಾರತದ ಅಮನ್ ಸೆಹ್ರಾವತ್ ಫೈನಲ್‌ನಲ್ಲಿ ವಿಶ್ವಚಾಂಪಿಯನ್ ಉತ್ತರಕೊರಿಯಾದ ಚಾಂಗ್ ಸಾಂಗ್ ಹಾನ್ ಅವರನ್ನು ೧೧-೭ ಅಂತರದಿಂದ

ಸೋಲಿಸಿ, ಚಿನ್ನದ ಪದಕಕ್ಕೆ ಭಾಜನರಾಗಿದ್ದಾರೆ. ಈ ಪ್ರದರ್ಶನಗಳ ಮೂಲಕ ಭಾರತ ಈವರೆಗೆ ೨೧ ಚಿನ್ನ, ೨೭ ಬೆಳ್ಳಿ ಮತ್ತು ೩೭ ಕಂಚು ಸೇರಿದಂತೆ ೮೫ ಪದಕಗಳನ್ನು ಪಡೆಯುವ ಮೂಲಕ ಪದಕ ಪಟ್ಟಿಯಲ್ಲಿ ನಾಲ್ಕನೇ ಸ್ಥಾನಕ್ಕೇರಿದೆ.

**<><*<><>*><>**

ಚಂಡೀಗಢದಲ್ಲಿಂದು ನಡೆಯುತ್ತಿರುವ ಭಾರತ-ವೆಸ್ಟ್ ಇಂಡೀಸ್ ತಂಡಗಳ ನಡುವಿನ ೩ನೇ ಹಾಗೂ ಅಂತಿಮ ಏಕದಿನ ಅಂತಾರಾಷ್ಟ್ರೀಯ ಕ್ರಿಕೆಟ್ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಭಾರತ ನಿಗದಿತ ೫೦ ಓವರ್‌ಗಳಲ್ಲಿ ೭ ವಿಕೆಟ್ ಕಳೆದುಕೊಂಡು ೩೫೧ ರನ್ ಗಳಿಸಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**